# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 445 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13.08.2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರು ನಗರ ಜಿಲ್ಲೆಗಳಲ್ಲಿ ಪೋಡಿಗೆ ಎಷ್ಟು ಪ್ರಕರಣಗಳು ದಾಖಲಾಗಿವೆ ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು) | ಪ್ರಸಕ್ತ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಗಳಲ್ಲಿ ವಿವಿಧ ಪೋಡಿ ಕೋರಿ ಮೋಜಿಣಿ ತಂತ್ರಾಂಶದಲ್ಲಿ ಸಾರ್ವಜನಿಕ ರಿಂದ ಸ್ವೀಕೃತವಾದ ಅರ್ಜಿಗಳ ತಾಲ್ಲೂಕುವಾರು ಪ್ರಗತಿ ವಿವರ ಕೆಳಕಂಡಂತಿದೆ: |
| (ಆ) | ದಾಖಲಾಗಿರುವ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳು ಇತ್ಯರ್ಥಗೊಂಡಿವೆ; ಮತ್ತು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು) | (see table below) ಬಾಕಿ ಇರುವ 7,029 ಅರ್ಜಿಗಳ ಪೈಕಿ- 4,070 ಅರ್ಜಿಗಳು ಪಹಣಿ ತಿದ್ದುಪಡಿಗಾಗಿ ಕಂದಾಯ ಶಾಖೆಯಲ್ಲಿ ಮತ್ತು 2,959 ಅರ್ಜಿಗಳು ಭೂಮಾಪನ ಶಾಖೆಯಲ್ಲಿ ಅಳತೆ ಕುರಿತು ಬಾಕಿಯಿರುತ್ತವೆ. |
| (ಇ) | ಪೋಡಿಗೆ ಸಂಬಂಧಿಸಿದಂತೆ ಸರ್ಕಾರಿ ಭೂಮಾಪಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಈ) | ಹಾಗಿದ್ದಲ್ಲಿ, ಭೂಮಾಪಕರನ್ನು ನೇಮಕ ಮಾಡದಿರಲು ಇರುವ ಕಾರಣಗಳೇನು; ಯಾವ ಕಾಲಮಿತಿಯೊಳಗೆ ನೇಮಕ ಮಾಡಲಾಗುವುದು?(ಸಂಪೂರ್ಣ ಮಾಹಿತಿ ಒದಗಿಸುವುದು) | ಭೂಮಾಪನ ಇಲಾಖೆಯಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆಗಳ ಪೈಕಿ 750 ಭೂಮಾಪಕರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಸರ್ಕಾರವು ಅನುಮತಿಸಿದೆ. ಅದರಂತೆ ಕರ್ನಾಟಕ ಲೋಕಸೇವಾ ಆಯೋಗದವರಿಗೆ ನೇರ ನೇಮಕಾತಿಯಿಂದ ಭರ್ತಿ ಮಾಡಲು ಕೋರಲಾಗಿ, ಕರ್ನಾಟಕ ಲೋಕಸೇವಾ ಆಯೋಗವು ನೇಮಕಾತಿ ಸಂಬಂಧ ಅಧಿಸೂಚನೆ ಹೊರಡಿಸಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ದಿನಾಂಕ:29.03.2025ರ ಸುತ್ತೋಲೆಯನ್ವಯ ದಿನಾಂಕ:25.11.2024ರ ನಂತರ ಹೊರಡಿಸಿರುವ ಅಧಿಸೂಚನೆಗಳನ್ನು ರದ್ದುಪಡಿಸಲು ಸೂಚಿಸಿದ್ದರ ಮೇರೆಗೆ ಸದರಿನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ರದ್ದುಗೊಳಿಸಲಾಗಿರುತ್ತದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಅನುಮೋದನೆ ನೀಡಿದ ಕೂಡಲೇ ನೇಮಕಾತಿ ಪ್ರಕ್ರಿಯೆಯನ್ನು ಚಾಲ್ತಿಗೊಳಿಸಿ, ಭೂಮಾಪಕರನ್ನು ನೇಮಕ ಮಾಡಿಕೊಳ್ಳಲಾಗುತ್ತದೆ. |

| ತಾಲ್ಲೂಕು | ಆ. ಶಿಲ್ಕು | ಸ್ವೀಕೃತಿ | ಒಟ್ಟು | ವಿಲೇ | ಕಂದಾಯ ಶಾಖೆಯಲ್ಲಿ ಬಾಕಿ | ಸರ್ವೆ ಶಾಖೆಯಲ್ಲಿ ಬಾಕಿ | ಒಟ್ಟು ಬಾಕಿ |
|---|---|---|---|---|---|---|---|
| ಬೆಂಗಳೂರು ಉತ್ತರ | 864 | 787 | 1651 | 629 | 1022 | 577 | 445 |
| ಬೆಂಗಳೂರು ದಕ್ಷಿಣ | 1189 | 1367 | 2556 | 1208 | 1348 | 811 | 537 |
| ಆನೇಕಲ್ | 2080 | 3226 | 5306 | 2350 | 2956 | 1806 | 1150 |
| ಬೆಂಗಳೂರು ಪೂರ್ವ | 765 | 1539 | 2304 | 1460 | 844 | 405 | 439 |
| ಯಲಹಂಕ | 881 | 1619 | 2500 | 1641 | 859 | 471 | 388 |
| **ಒಟ್ಟು** | **5779** | **8538** | **14317** | **7288** | **7029** | **4070** | **2959** |

**ಸಂಖ್ಯೆ: ಕಂಇ 155 ಎಸ್ಎಸ್‌ಸಿ 2025**

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು